# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ರಾಷ್ಟ್ರೀಯ ಮೀನುಗಾರರ ಕಲ್ಯಾಣ ಯೋಜನೆಯಡಿ ರೂ.200.00 ಲಕ್ಷಗಳ ಅನುದಾನ ಬಿಡುಗಡೆಗೊಳಿಸುವಿಕೆ.

ಓದಲಾಗಿದೆ:- (1) ಆದೇಶ ಸಂಖ್ಯೆ:ಪಸಂಮೀ/65/ಮೀಇಯೋ/2010 ದಿನಾಂಕ:08-04-2010.

(2) ಭಾರತ ಸರ್ಕಾರದ ಪತ್ರ ಸಂಖ್ಯೆ:12012/2/2006-(FY)(WU) ದಿನಾಂಕ:16-06-2008.

(3) ಆದೇಶ ಸಂಖ್ಯೆ:ಪಸಂಮೀ/103/ಮೀಇಯೋ/2008 ದಿನಾಂಕ:02-02-2009.

(4) ಆದೇಶ ಸಂಖ್ಯೆ:ಪಸಂಮೀ/23/ಮೀಇಯೋ/2009 ದಿನಾಂಕ:02-03-2009.

(5) ಪತ್ರ ಸಂಖ್ಯೆ:ಪಂವಾಯೋ/21/2010-11 ದಿನಾಂಕ:20-11-2010 ಮತ್ತು 20-12-2010.

******

## ಪ್ರಸ್ತಾವನೆ:

ಮೇಲೆ ಕ್ರಮಾಂಕ (1)ರಲ್ಲಿ ಓದಲಾದ ಆದೇಶದಲ್ಲಿ, ಕೇಂದ್ರ ಪುರಸ್ಕೃತ ಯೋಜನೆಯಡಿ ಮೀನುಗಾರರ ಕಲ್ಯಾಣ ಯೋಜನೆಯನ್ನು 2010-11ನೇ ಸಾಲಿಗೆ ಮುಂದುವರಿಸಿ ಆಡಳಿತಾತ್ಮಕ ಮಂಜೂರಾತಿಯನ್ನು ನೀಡಲಾಗಿದೆ.

ಮೇಲೆ ಕ್ರಮಾಂಕ (2)ರಲ್ಲಿ ಓದಲಾದ ಭಾರತ ಸರ್ಕಾರದ ಪತ್ರದಲ್ಲಿ, ಸದರಿ ಯೋಜನೆಗೆ ಸಂಬಂಧಿಸಿದಂತೆ ಕೇಂದ್ರದ ಪಾಲಿನ ಅನುದಾನ ರೂ.200.00 ಲಕ್ಷಗಳನ್ನು ರಾಜ್ಯ ಸರ್ಕಾರಕ್ಕೆ ಬಿಡುಗಡೆ ಮಾಡಲಾಗಿದೆ.

ಮೇಲೆ ಕ್ರಮಾಂಕ (3)ರಲ್ಲಿ ಓದಲಾದ ಆದೇಶದಲ್ಲಿ, ಕೇಂದ್ರದ ಪಾಲು ರೂ.200.00 ಲಕ್ಷಗಳನ್ನು ಬಿಡುಗಡೆಗೊಳಿಸಲಾಗಿದೆ.

ಮೇಲೆ ಕ್ರಮಾಂಕ (4)ರಲ್ಲಿ ಓದಲಾದ ಆದೇಶದಲ್ಲಿ, 1000 ಮನೆಗಳನ್ನು ನಿರ್ಮಿಸಲು ವಿಧಾನಸಭಾ ಕ್ಷೇತ್ರವಾರು ಹಂಚಿಕೆ ಮಾಡಲಾಗಿದೆ.

ಮೇಲೆ ಕ್ರಮಾಂಕ (5)ರಲ್ಲಿ ಓದಲಾದ ಪತ್ರದಲ್ಲಿ, ಮೀನುಗಾರಿಕೆ ನಿರ್ದೇಶಕರು ರಾಷ್ಟ್ರೀಯ ಮೀನುಗಾರರ ಕಲ್ಯಾಣ ಯೋಜನೆಯಡಿ ಬಿಡುಗಡೆಯಾದ ರೂ.200.00 ಲಕ್ಷ ಸಂಪೂರ್ಣ ವೆಚ್ಚವಾಗಿರುತ್ತದೆ ಎಂದು ತಿಳಿಸಿರುತ್ತಾರೆ. ಸದರಿ ಯೋಜನೆಯಡಿ 399 ಮನೆಗಳು ಸಂಪೂರ್ಣಗೊಂಡಿದ್ದು, 601 ಮನೆಗಳು ನಿರ್ಮಾಣದ ವಿವಿಧ ಹಂತಗಳಲ್ಲಿರುತ್ತವೆ, ಅವುಗಳನ್ನು ಪೂರ್ಣಗೊಳಿಸಲು ಬಾಕಿ ಇರುವ ರಾಜ್ಯದ ಪಾಲಿನ ಅನುದಾನ ಪ್ರತಿಶತ 50ರಷ್ಟು ಅಂದರೆ ರೂ.200.00 ಲಕ್ಷಗಳನ್ನು ಬಿಡುಗಡೆಗೊಳಿಸುವಂತೆ ಕೋರಿರುತ್ತಾರೆ.

-2-

ಮೀನುಗಾರಿಕೆ ನಿರ್ದೇಶಕರ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ:ಪಸಂಮೀ 248 ಮೀಇಯೋ 2010 ಬೆಂಗಳೂರು, ದಿನಾಂಕ:18-01-2011**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನಲೆಯಲ್ಲಿ, ಕೇಂದ್ರ ಪುರಸ್ಕೃತ ರಾಷ್ಟ್ರೀಯ ಮೀನುಗಾರರ ಕಲ್ಯಾಣ ಯೋಜನೆಯಡಿ ವಿವಿಧ ಹಂತದಲ್ಲಿ ಬಾಕಿ ಇರುವ ಮನೆಗಳನ್ನು ಪೂರ್ಣಗೊಳಿಸಲು 2010-11ನೇ ಸಾಲಿನಲ್ಲಿ ರಾಜ್ಯದ ಪಾಲಿನ ಅನುದಾನ ಪ್ರತಿಶತ 50ರಷ್ಟು ಅಂದರೆ ರೂ.200.00 ಲಕ್ಷ (ಇನ್ನೂರು ಲಕ್ಷ ರೂಪಾಯಿಗಳು ಮಾತ್ರ)ಗಳನ್ನು ಬಿಡುಗಡೆಗೊಳಿಸಿದೆ.

ಸದರಿ ವೆಚ್ಚವನ್ನು 2010-11ನೇ ಸಾಲಿನ ಲೆಕ್ಕಶೀರ್ಷಿಕೆ "2405-ಮೀನುಗಾರಿಕೆ-00-120-ಮೀನುಗಾರಿಕೆ ಸಹಕಾರಿ ಸಂಸ್ಥೆಗಳು-0-07-ಮೀನುಗಾರರ ಕಲ್ಯಾಣ-104-ಅಂಶದಾನಗಳು (ಯೋಜನೆ)" ಇದರಡಿ ಒದಗಿಸಿರುವ ರೂ.400.00 ಲಕ್ಷ (ರಾಜ್ಯದ ಪಾಲಿನ ರೂ.200.00 ಲಕ್ಷ)ಗಳ ಅನುದಾನದಿಂದ ಭರಿಸತಕ್ಕದ್ದು.

ಸದರಿ ಮೊತ್ತವನ್ನು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮ, ಮಂಗಳೂರುರವರು ಸಲ್ಲಿಸುವ ಪೇಯೀಸ್ ರಸೀದಿಗೆ ಮೀನುಗಾರಿಕೆ ನಿರ್ದೇಶಕರು, ಬೆಂಗಳೂರುರವರು ಮೇಲು ರುಜು ಮಾಡಿ ರಾಜ್ಯ ಹುಜೂರ್ ಖಜಾನೆಯಿಂದ ಸೆಳೆದು ಪಾವತಿಸಲು ಅನುಮತಿ ನೀಡಿದೆ.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂಖ್ಯೆ:ಪಸಂಮೀ/02/ಆಂಆಸ/2011 ದಿನಾಂಕ:13-01-2011ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ
(ಡಿ.ಎಂ.ರಾಜಣ್ಣ) 18/1/
ಸರ್ಕಾರದ ಅಧೀನ ಕಾರ್ಯದರ್ಶಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ(ಮೀ)

ಇವರಿಗೆ

1) ಮಹಾಲೇಖಪಾಲರು (ಎ ಮತ್ತು ಇ) ಕರ್ನಾಟಕ, ಬೆಂಗಳೂರು
2) ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು
3) ಎಲ್ಲಾ ಜಿಲ್ಲಾಧಿಕಾರಿಗಳಿಗೆ (ಮೀನುಗಾರಿಕೆ ನಿರ್ದೇಶಕರ ಮುಖಾಂತರ)
4) ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಎಲ್ಲಾ ಜಿಲ್ಲಾ ಪಂಚಾಯತ್‌ಗಳಿಗೆ (ಮೀನುಗಾರಿಕೆ ನಿರ್ದೇಶಕರ ಮುಖಾಂತರ)
5) ಜಂಟಿ ನಿರ್ದೇಶಕರು, ಖಜಾನೆ ಗಣಕ ಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
6) ಆಂತರಿಕ ಆರ್ಥಿಕ ಸಲಹೆಗಾರರು, ಕೃ.ತೋ. ಮತ್ತು ಪ.ಸಂ.ಮೀ. ಇಲಾಖೆ.
7) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮ (ನಿ), ಮಂಗಳೂರು.
8) ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
9) ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು-560 001.
10) ಮೀನುಗಾರಿಕೆ ಇಲಾಖೆಯ ಎಲ್ಲಾ ಅಧಿಕಾರಿಗಳಿಗೆ (ಮೀನುಗಾರಿಕೆ ನಿರ್ದೇಶಕರ ಮುಖಾಂತರ)
11) ಮಾನ್ಯ ಬಂದರು, ಒಳನಾಡು ಜಲಸಾರಿಗೆ, ಪರಿಸರ, ಜೀವಿಶಾಸ್ತ್ರ, ಮೀನುಗಾರಿಕೆ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರ ಆಪ್ತಕಾರ್ಯದರ್ಶಿಗಳು.
12) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು